# ಕರ್ನಾಟಕ ಸರ್ಕಾರ
# ಸಮಾಜ ಕಲ್ಯಾಣ ಇಲಾಖೆ
# ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ

---

**ಸಂಖ್ಯೆ**: SWD/IGCCD/0S-04/CA/2025-26

ನಿರ್ದೇಶಕರ ಕಛೇರಿ
ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ,
ಡಾ.ಬಾಬು ಜಗಜೀವನರಾಮ್
ಸಂಶೋಧನಾ ಸಂಸ್ಥೆ
ಮಾಗಡಿ ಮುಖ್ಯ ರಸ್ತೆ, ಸುಮನಹಳ್ಳಿ
ಜಂಕ್ಷನ್.
ಬೆಂಗಳೂರು.
ದಿನಾಂಕ: 20-08-2025

## ಅಧಿಸೂಚನೆ

**ವಿಷಯ**: 2025-26ನೇ ಸಾಲಿನ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಸಿ.ಎ. ಫೌಂಡೇಶನ್ ಪರೀಕ್ಷಾ ಪೂರ್ವ ಆನ್‌ಲೈನ್ ತರಬೇತಿಯನ್ನು ನೀಡುವ ಬಗ್ಗೆ.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025-26 ನೇ ಸಾಲಿನಲ್ಲಿ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಮೂಲಕ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಸಿ.ಎ. ಫೌಂಡೇಶನ್ ಪರೀಕ್ಷಾ ಪೂರ್ವ ಆನ್‌ಲೈನ್ ತರಬೇತಿಯನ್ನು (2025-26ರಲ್ಲಿ 1ನೇ ಪಿಯುಸಿ/11ನೇ ತರಗತಿ ಅಭ್ಯರ್ಥಿಗಳಿಗೆ, ಹಾಗೂ 2026-27ರಲ್ಲಿ 2ನೇ ಪಿಯುಸಿ/12ನೇ ತರಗತಿಯಲ್ಲಿ ಮುಂದುವರೆಯುವ ಸದರಿ ಅಭ್ಯರ್ಥಿಗಳಿಗೆ) ನೀಡುವ ಉದ್ದೇಶದಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅದರಂತೆ, ತರಬೇತಿ ಅವಧಿ, ತರಬೇತಿ ವಿವರ, ಅರ್ಜಿ ಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ ಮತ್ತು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದ ವಿವರಗಳು ಈ ಕೆಳಕಂಡಂತಿದೆ.

| **ಕ್ರ. ಸಂ.** | **ವಿವರ** | |
|---|---|---|
| 01. | **ತರಬೇತಿ ವಿವರ** | 2025-26ರಲ್ಲಿ 1ನೇ ಪಿಯುಸಿ/11ನೇ ತರಗತಿ ವಿದ್ಯಾರ್ಥಿಗಳಿಗೆ, ಹಾಗೂ 2026-27ರಲ್ಲಿ 2ನೇ ಪಿಯುಸಿ/12ನೇ ತರಗತಿಯಲ್ಲಿ ಮುಂದುವರೆಯುವ ಸದರಿ ವಿದ್ಯಾರ್ಥಿಗಳಿಗೆ ನುರಿತ ತರಬೇತಿ ಸಂಸ್ಥೆಯಿಂದ ಸಿ.ಎ. ಫೌಂಡೇಶನ್ ಪರೀಕ್ಷಾ ಪೂರ್ವ ಆನ್‌ಲೈನ್ ತರಬೇತಿ ನೀಡಲಾಗುವುದು. |
| 02. | **ತರಬೇತಿ ಅವಧಿ** | 500 ಗಂಟೆಗಳು (2025-26 ರಿಂದ 2026-27 ರವರೆಗೆ) |
| 03. | **ವಯಸ್ಸು** | • ಕನಿಷ್ಠ 15 ವರ್ಷ<br>• ಗರಿಷ್ಠ 18 ವರ್ಷ<br>(ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು) |

| | | |
|---|---|---|
| 04. | **ವಿದ್ಯಾರ್ಹತೆ** | ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ 1ನೇ ಪಿಯುಸಿ/11ನೇ ತರಗತಿ ತರಗತಿಯಲ್ಲಿ ಪ್ರವೇಶ ಪಡೆದಿರಬೇಕು |
| 05. | **ಅಭ್ಯರ್ಥಿಯ ಸಾಮಾನ್ಯ ಅರ್ಹತೆ** | 1. ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು<br>2. ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ನಿಗಧಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು. |
| 06. | **ವಾರ್ಷಿಕ ಆದಾಯ** | ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ ರೂ. 5.00 ಲಕ್ಷ ಮೀರಿರಬಾರದು |
| 07. | **ಆಯ್ಕೆ ವಿಧಾನ** | ಮೊದಲು ಅರ್ಜಿ ಸಲ್ಲಿಸದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು |
| 08. | **ಅರ್ಜಿ ಸಲ್ಲಿಸುವ ವೆಬ್ ಸೈಟ್ ವಿಳಾಸ** | https://igccd.karnataka.gov.in |
| 09. | **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | 20-09-2025 |

**ತರಬೇತಿಯ ನಿಯಮಗಳು ಮತ್ತು ಷರತ್ತುಗಳು:**

- ಅಭ್ಯರ್ಥಿಯು ಕಡ್ಡಾಯವಾಗಿ 1ನೇ ಪಿಯುಸಿ/11ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.
- ಈಗಾಗಲೇ 1ನೇ ಪಿಯುಸಿ/11ನೇ ತರಗತಿ ಹಾಗೂ 2ನೇ ಪಿಯುಸಿ/12ನೇ ತರಗತಿಯನ್ನು ಪೂರ್ಣಗೊಳಿಸಿದವರಿಗೆ ಈ ತರಬೇತಿಯು ಅನ್ವಯಿಸುವುದಿಲ್ಲ.
- ಅಭ್ಯರ್ಥಿಯು ತರಬೇತಿಯ ಎಲ್ಲಾ ನಿಯಮಗಳು ಮತ್ತು ನಿಬಂಧನೆಗಳನ್ನು ಪಾಲಿಸಬೇಕು ಮತ್ತು ತರಬೇತಿಯ ವೇಳಾಪಟ್ಟಿಯನ್ನು ನಿರ್ವಹಿಸಬೇಕು. ತರಬೇತಿಯ ನಿಯಮಗಳನ್ನು ಪಾಲಿಸದಿದ್ದರೆ ಅಭ್ಯರ್ಥಿಯನ್ನು ಅನರ್ಹಗೊಳಿಸುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.
- ತರಬೇತಿ ಸಂಸ್ಥೆ, ಅಧ್ಯಾಪಕ ಸದಸ್ಯರು ಅಥವಾ ಬೋಧಕರ ಕಡೆಗೆ ಅವಿಧೇಯತೆ ಅಥವಾ ದುರ್ನಡತೆ ಪ್ರದರ್ಶಿಸುವ ಯಾವುದೇ ಅಭ್ಯರ್ಥಿಯನ್ನು ತಕ್ಷಣವೇ ಅನರ್ಹಗೊಳಿಸಲಾಗುತ್ತದೆ.
- ಅಭ್ಯರ್ಥಿಯು ಎರಡು ವರ್ಷಗಳ ತರಬೇತಿಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು.
- ಪರೀಕ್ಷೆಯನ್ನು ನಡೆಸಿ, ಅದರ ಫಲಿತಾಂಷದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಪೂರ್ಣ ಅಧಿಕಾರವನ್ನು ಇಲಾಖೆಯು ಹೊಂದಿದೆ.
- ಇಲಾಖಾ ವೆಬ್-ಸೈಟ್‌ನಲ್ಲಿ ಕಾಲಕಾಲಕ್ಕೆ ನೀಡಲಾಗಿರುವ ಮಾಹಿತಿಯನ್ನು ಅಧಿಕೃತ ಹಾಗೂ ಅಂತಿಮಮವಾಗಿರುತ್ತದೆ.

- ಇಲಾಖೆಯಿಂದ ಯಾವುದೇ ಪತ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖಾ ವೆಬ್‌ಸೈಟ್‌ನ್ನು ಕಾಲಕಾಲಕ್ಕೆ ವೀಕ್ಷಿಸತಕ್ಕದ್ದು ಹಾಗೂ ವೆಬ್‌ಸೈಟ್‌ನಲ್ಲಿ ನೀಡಲಾಗುವ ಮಾಹಿತಿಯನ್ನು ಕಡ್ಡಾಯವಾಗಿ ಅನುಸರಿಸುವುದು.
- ತಮ್ಮ ಮಾಹಿತಿಯ ಕಾರಣದಿಂದ ಉಂಟಾಗಬಹುದಾದ ಲೋಪಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಕಾರಣರಾಗಿರುತ್ತಾರೆ.

Sathyashree.R

ನಿರ್ದೇಶಕರು,
ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ,
ಬೆಂಗಳೂರು.